ಗ್ರಾಮ : UNIREG
ದೂರವಾಣಿ ಸಂಖ್ಯೆ :2419440/2419361
ಫ್ಯಾಕ್ಸ್ ಸಂಖ್ಯೆ : 0821- 2419363/2419301

ಇಮೇಲ್ :registrar@uni-mysore.ac.in
ವೆಬ್ ಸೈಟ್: www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ1916

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್‌ಭವನ,ಅಂಚೆ ಪೆಟ್ಟಿಗೆ ಸಂಖ್ಯೆ 406,
ಮೈಸೂರು-570 005.

ವಿಷಯ: 2017–18ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.
ಉಲ್ಲೇಖ: 1. ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರ ಆಯ್ಕೆಯ ಸಂಬಂಧ ದಿನಾಂಕ 22-07-2017ರಂದು ನಡೆದ ಆಯ್ಕೆ ಸಮಿತಿ ಸಭೆಯ ನಡಾವಳಿ.
2. ವಿಶ್ವವಿದ್ಯಾನಿಲಯದ ಪ್ರಕಟಣೆ ಸಂಖ್ಯೆ: ಇಟಿ.11/92/2017-18 ದಿನಾಂಕ 30-06-2017.

—

**ಆದೇಶ ಸಂಖ್ಯೆ: ಇಟಿ2/121/2017-18 ದಿನಾಂಕ 06ನೇ ಸೆಪ್ಟೆಂಬರ್2017 (2)**

ದಿನಾಂಕ 22-07-2017ರಂದು ನಡೆದ ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರ ಆಯ್ಕೆ ಸಮಿತಿ ಸಭೆಯ ಶಿಫಾರಸು (ನಿರ್ಣಯ) ಹಾಗೂ ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, 2017-18ನೇ ಶೈಕ್ಷಣಿಕ ಸಾಲಿನಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿನ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಬೋಧನಾ ಕಾರ್ಯ ನಿರ್ವಹಿಸಲು ಈ ಕೆಳಗಿನಂತೆ ಅತಿಥಿ ಉಪನ್ಯಾಸಕರಾಗಿ ಆಹ್ವಾನಿಸಲಾಗಿದೆ.

| ಅತಿಥಿ ಉಪನ್ಯಾಸಕರ ಹೆಸರು | ವಿಷಯ | ವಾರಕ್ಕೆ ಒಟ್ಟು ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯ (ಗಂಟೆಗಳಲ್ಲಿ) * | ಸ್ನಾತಕೋತ್ತರ ವಿಭಾಗ / ಸ್ನಾತಕೋತ್ತರ ಕೇಂದ್ರ / ಘಟಕ ಕಾಲೇಜು | ಮಾಹೆಯಾನ ಸಂಭಾವನೆ ರೂ.ಗಳಲ್ಲಿ |
|---|---|---|---|---|
| ರಶ್ಮಿ.ಜೆ.<br>ಅತಿಥಿ ಉಪನ್ಯಾಸಕರು,<br>ಶಿಕ್ಷಣಶಾಸ್ತ್ರ ಅಧ್ಯಯನ ವಿಭಾಗ,<br>ಮೈ.ವಿ.ವಿ.ಮೈಸೂರು.<br>ಮೊ: 9740099954 | ಶಿಕ್ಷಣಶಾಸ್ತ್ರ | 12 | ಶಿಕ್ಷಣಶಾಸ್ತ್ರ ಅಧ್ಯಯನ ವಿಭಾಗ, | 22,500/- |

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸಂಬಂಧಿಸಿದ ವಿಭಾಗದ ಅಧ್ಯಕ್ಷರು ಹಂಚಿಕೆ ಮಾಡುವರು. ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.

ಆಹ್ವಾನಿತ ಅತಿಥಿ ಉಪನ್ಯಾಸಕರು ಈ ಆದೇಶ ನೀಡಿದ 7 ದಿನಗಳೊಳಗೆ ಸಂಬಂಧಪಟ್ಟ ವಿಭಾಗದ ಅಧ್ಯಕ್ಷರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಆದೇಶವು ರದ್ದಾಗುತ್ತದೆ.

ಈ ವೆಚ್ಚವನ್ನು ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಖಾತೆಯ "ತಾತ್ಕಾಲಿಕ ಅಧ್ಯಾಪಕರ ವೇತನ" (ಕೋಡ್ 228) ಶೀರ್ಷಿಕೆಯಿಂದ ಭರಿಸಬಹುದಾಗಿದೆ.

ಷರತ್ತುಗಳು:

1. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಅಧ್ಯಯನ ವಿಭಾಗದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಅಉನೇ/2012-13ನೇ ಪಾವಿ-1, ದಿನಾಂಕ 02-07-2013ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.
2. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿವಸ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.
3. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾಜರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.
4. ಮೈಸೂರು ವಿಶ್ವವಿದ್ಯಾನಿಲಯದಲ್ಲಿ 2017-18ನೇ ಶೈಕ್ಷಣಿಕ ವರ್ಷದಲ್ಲಿ 12 ಗಂಟೆಗಳ ಕಾರ್ಯಭಾರ ನಿರ್ವಹಿಸುವ ಅತಿಥಿ ಉಪನ್ಯಾಸಕರುಗಳು ಬೇರೆ ಸರ್ಕಾರಿ ಕಾಲೇಜು ಅಥವಾ ಖಾಸಗಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸಬಾರದು.

ಆಹ್ವಾನಿತ ಅತಿಥಿ ಉಪನ್ಯಾಸಕರು ಕೆಲಸಕ್ಕೆ ವರದಿ ಮಾಡಿಕೊಳ್ಳುವಾಗ ಈ ಕೆಳಕಂಡಂತೆ ಮುಚ್ಚಳಿಕೆಯನ್ನು ನೀಡತಕ್ಕದ್ದು.

**ಮುಚ್ಚಳಿಕೆ**

1. ಈ ಮೂಲಕ ಪ್ರಮಾಣೀಕರಿಸುವುದೇನೆಂದರೆ, ವಿಶ್ವವಿದ್ಯಾನಿಲಯವು 2017-18ನೇ ಶೈಕ್ಷಣಿಕ ವರ್ಷಕ್ಕೆ ಅಥವಾ ಮುಂದಿನ ಆದೇಶದವರೆಗೆ, ಯಾವುದು ಮೊದಲು ಘಟಿಸುವುದೋ ಅಲ್ಲಿಯವರೆಗೆ ಬೋಧನಾ ಕಾರ್ಯವನ್ನು ನಿರ್ವಹಿಸಲು ನನ್ನನ್ನು ಆಹ್ವಾನಿಸಿರುವುದು ತಾತ್ಕಾಲಿಕವಾಗಿರುತ್ತದೆ ಎಂದು ತಿಳಿದಿರುತ್ತೇನೆ. ಜೊತೆಗೆ ವಿಶ್ವವಿದ್ಯಾನಿಲಯವು ಯಾವುದೇ ಮುನ್ಸೂಚನೆ ಇಲ್ಲದಂತೆ ಹಾಗೂ ಯಾವುದೇ ಕಾರಣ ನೀಡದೆ ನನಗೆ ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಹಿಂಪಡೆಯಬಹುದಾಗಿದೆ.

2. ನಾನು ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಅಉನೇ/2012-13ನೇ ಪಾವಿ-1, ದಿನಾಂಕ 02-07-2013ರಲ್ಲಿ ಸೂಚಿಸಿರುವಂತೆ, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಅತಿಥಿ ಉಪನ್ಯಾಸಕನಾಗಿ ಕೆಲಸ ನಿರ್ವಹಿಸುತ್ತಿರುವಾಗ ಯಾವುದೇ ಸರ್ಕಾರಿ/ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕನಾಗಿ ಕರ್ತವ್ಯ ನಿರ್ವಹಿಸುವುದಿಲ್ಲ ಎಂದು ಈ ಮೂಲಕ ಪ್ರಮಾಣೀಕರಿಸುತ್ತೇನೆಹಾಗೂ ಹಾಗೇನಾದರೂ ಕೆಲಸ ನಿರ್ವಹಿಸುವುದು ಕಂಡು ಬಂದಲ್ಲಿ, ಈ ನೇಮಕಾತಿಯನ್ನು ಯಾವುದೇ ಯಾವುದೇ ಸೂಚನೆ ನೀಡದೇ ರದ್ದುಪಡಿಸಲಾಗುವುದೆಂದು ತಿಳಿದಿರುತ್ತೇನೆ.

ಮೇಲಿನ ಎಲ್ಲಾ ಷರತ್ತುಗಳಿಗೆ ಬದ್ಧನಾಗಿ ತಾವು ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಒಪ್ಪಿಕೊಂಡಿರುತ್ತೇನೆ.

ಆದೇಶದ ಮೇರೆಗೆ

ಕುಲಸಚಿವ

ಇವರಿಗೆ:

1. ಸಂಬಂಧಪಟ್ಟ ಅತಿಥಿ ಉಪನ್ಯಾಸಕರಿಗೆ – – ಅಧ್ಯಕ್ಷರು, ಶಿಕ್ಷಣಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು, ಇವರ ಮುಖಾಂತರ.
2. ಅಧ್ಯಕ್ಷರು, ಶಿಕ್ಷಣಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು,-ಅತಿಥಿ ಉಪನ್ಯಾಸಕರಿಂದ ಮೇಲೆ ತಿಳಿಸಿರುವ ಮುಚ್ಚಳಿಕೆಯನ್ನು ಕಡ್ಡಾಯವಾಗಿ ಬರೆಸಿಕೊಳ್ಳುವುದು ಮತ್ತು